# 2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಃ

## ಉತ್ತರ ಕನ್ನಡ : ಕಾರವಾರ

### ಸ್ಪೆಷಲ್ ಕೇಸ್ ನಂ. 25/2020

**ದೋ.ಸಾ. : 18 ಫ್ರಾ.ಸಾ. : 15**

| | | |
|---|---|---|
| ಸಾಕ್ಷಿಯ ಹೆಸರು | : | ಓಂಕಾರಪ್ಪ ಹನುಮಂತಪ್ಪ |
| ತಂದೆಯ ಹೆಸರು | : | ಹನುಮಂತಪ್ಪ |
| ವಯಸ್ಸು | : | 65 ವರ್ಷ |
| ಕೆಲಸ | : | ನಿವೃತ್ತ ಉಪ ನಿರೀಕ್ಷಕರು |
| ವಾಸ | : | ದಾವಣಗೆರೆ |

**ದಿನಾಂಕಃ 28-04-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದ</u>**

1. ನವೆಂಬರ್-2019 ರಿಂದ ಏಪ್ರಿಲ್-2021 ರ ವರೆಗೆ ನಾನು ಭಟ್ಕಳ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ದಿಃ 06-01-2020 ರಂದು ರಾತ್ರಿ 09-00 ಗಂಟೆ ಸಮಯದಲ್ಲಿ ನಾನು ಠಾಣಾ ಕರ್ತ್ಯದಲ್ಲಿದ್ದಾಗ, ಈ ಪ್ರಕರಣದ ಪಿರ್ಯಾದಿ ಚಾಸಾ-1 ಮಂಜು ಗೊಂಡ ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ದೂರನ್ನು ಸ್ವೀಕರಿಸಿಕೊಂಡು, ನಮ್ಮ ಠಾಣಾ ಗುನ್ನಾ ನಂಃ 05/2020 ರಲ್ಲಿ ಪ್ರಕರಣ ದಾಖಲಿಸಿಕೊಂಡು, ಪ್ರ.ವ.ವರದಿ ಹಾಗೂ ದೂರನ್ನು ನಮ್ಮ ಠಾಣಾ ಸಿಬ್ಬಂದಿಯಾದ ಪಿ.ಸಿ-ರಾಮಚಂದ್ರಪ್ಪ/ಚಾಸಾ-9 ರವರ ಮೂಲಕ ನ್ಯಾಯಾಲಯಕ್ಕೆ ಕಳುಹಿಸಿರುತ್ತೇನೆ ಹಾಗೂ ಅದರ ಪ್ರತಿಯನ್ನು ನಮ್ಮ ಮೇಲಾಧಿಕಾರಿಗಳಿಗೆ ಇ-ಮೇಲ್ ಮೂಲಕ ಕಳುಹಿಸಿರುತ್ತೇನೆ. ಸಾಕ್ಷಿಯು ತಾನು ಸ್ವೀಕರಿಸಿದ ದೂರನ್ನು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿ.ಪಿ-1 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನು ನಿ.ಪಿ-1(ಬಿ) ಎಂದು ಗುರುತಿಸಲಾಯಿತು. ಅದೇ ರೀತಿ ಸಾಕ್ಷಿಯು ತಾನು ದಾಖಲಿಸಿದ ಪ್ರ.ವ.ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿ.ಪಿ-43 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-43(ಎ) ಎಂದು ಗುರುತಿಸಲಾಯಿತು. ಸದರಿ ಪ್ರಕರಣವು ಪರಿಶಿಷ್ಟ ಜಾತಿಗಳು ಮತ್ತು ಪರಿಶಿಷ್ಟ ಪಂಗಡಗಳ ( ದೌರ್ಜನ್ಯ ತಡೆ ) ಕಾಯ್ದೆ ಅಡಿ

ದಾಖಲಾದ ಪ್ರಕರಣವಾದ್ದರಿಂದ, ಈ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-19 ರವರಿಗೆ ವಹಿಸಿಕೊಟ್ಟಿರುತ್ತೇನೆ.

2. ನಂತರ ದಿಃ 07-03-2020 ರಂದು ಚಾಸಾ-19 ರವರು ನನ್ನನ್ನು ಹಾಗೂ ನಮ್ಮ ಇತರೇ ಸಿಬ್ಬಂದಿಗಳನ್ನು ಆರೋಪಿಗಳ ಪತ್ತೆಗಾಗಿ ನೇಮಿಸಿದ್ದು, ಅದರಂತೆ ನಾನು ಮತ್ತು ನಮ್ಮ ಸಿಬ್ಬಂದಿಗಳು ಭಟ್ಕಳದ ಗೊರಟೆ ಕ್ರಾಸ್ ಬಳಿ 1 ಮತ್ತು 2 ನೇ ಆರೋಪಿಗಳನ್ನು ವಶಕ್ಕೆ ಪಡೆದುಕೊಂಡು, ತನಿಖಾಧಿಕಾರಿಗಳ ಮುಂದೆ ಹಾಜರುಪಡಿಸಿರುತ್ತೇನೆ. ಈಗ ನ್ಯಾಯಾಲಯದ ಮುಂದೆ ಇರುವ 1 ಮತ್ತು 2 ನೇ ಆರೋಪಿಗಳನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿತರ ಪರ ಶ್ರೀ ಜಿ.ಟಿ.ಎನ್ ವಕೀಲರಿಂದ**

ಪಾಟೀ ಸವಾಲಿಗೆ ಸಮಯಾವಕಾಶ ಕೋರಿದ್ದು, ಸಮಯನ್ನು ನೀಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ.)

ಓ.ಹೇ.ಕೇ.ಸ.ಇ.

ಸಹಿ ಇದೆ/-

(ಮಾಯಣ್ಣ ಬಿ.ಎಲ್.)
2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರಕನ್ನಡ, ಕಾರವಾರ